ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 05 ನೇ ಫೆಬ್ರುವರಿ, 2021

ಸಣ್ಣ ಕೈಗಾರಿಕೆಗಳ ಘಟಕಗಳು

ಶ್ರೀ ಕೆ. ಎ. ತಿಪ್ಪೇಸ್ವಾಮಿ(ನಾಮನಿರ್ದೇಶನ ಹೊಂದಿದವರು) -

481 (576) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿ ಅಸ್ತಿತ್ವದಲ್ಲಿರುವ ಒಟ್ಟು ಸಣ್ಣ ಕೈಗಾರಿಕೆಗಳ ಘಟಕಗಳ ಸಂಖ್ಯೆ ಎಷ್ಟು; ಘಟಕಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಉದ್ಯೋಗಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮತ್ತು ವರ್ಗಾವಾರು ವಿವರಗಳನ್ನು ನೀಡುವುದು)

(ಆ) ದೇಶಾದ್ಯಂತ ವ್ಯಾಪಕವಾಗಿ ಹರಡಿದ್ದ ಕೋವಿಡ್-19 ಸೋಂಕು ಹಿನ್ನೆಲೆಯಲ್ಲಿ ಈ ಸೋಂಕಿನಿಂದ ಬಾಧಿತವಾದ ಸಣ್ಣ ಕೈಗಾರಿಕೆಗಳ ಘಟಕಗಳೆಷ್ಟು ಮತ್ತು ಇದರಿಂದ ಉದ್ಯೋಗ ಕಳೆದುಕೊಂಡ ಉದ್ಯೋಗಿಗಳೆಷ್ಟು; ಈ ಬಗ್ಗೆ ರಾಜ್ಯ ಸರ್ಕಾರ ಇತ್ತೀಚೆಗೆ ಗಣತಿಯನ್ನು ನಡೆಸಿದೆಯೇ; ನಡೆಸಿದ್ದಲ್ಲಿ, (ಜಿಲ್ಲಾವಾರು ಮತ್ತು ವರ್ಗಾವಾರು ವಿವರವನ್ನು ಒದಗಿಸುವುದು)

(ಇ) ಕೇಂದ್ರ ಸರ್ಕಾರದ `ಆತ್ಮ ನಿರ್ಭರ ಭಾರತ' ಅಭಿಯಾನದಡಿಯಲ್ಲಿ ರಾಜ್ಯ ಸರ್ಕಾರ ಕೇಂದ್ರ ಸರ್ಕಾರದಿಂದ ಬಾಧಿತ ಸಣ್ಣ ಕೈಗಾರಿಕೆಗಳ ಘಟಕಗಳನ್ನು ಪುನಶ್ಚೇತನಗೊಳಿಸಲು ಪಡೆದಿರುವ ಅನುದಾನವೆಷ್ಟು? (ಜಿಲ್ಲಾವಾರು ಮತ್ತು ವರ್ಗಾವಾರು ವಿವರಗಳನ್ನು ನೀಡುವುದು)